ಸುದ್ದಿ ಸಿಂಚನ

ಬಿಎಸ್‌ವೈ ಸಿಎಂ ಆಗಿದ್ದಾಗ ರಾಜ್ಯದ ಸಮಗ್ರ ಅಭಿವೃದ್ಧಿ: ಸುರೇಶ್‌ರಾಜು ಮೆಚ್ಚುಗೆ

ಮುಳಬಾಗಿಲು: ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ರಾಜ್ಯ ಕಂಡ ಮಹಾನ್ ಅಭಿವೃದ್ಧಿಯ ಹರಿಕಾರ ಎಂದು ಬಿಜೆಪಿ ತಾಲೂಕು ಅಧ್ಯಕ್ಷ ಮೈಸೂರು ಸುರೇಶ್ ರಾಜು ಅಭಿಪ್ರಾಯಪಟ್ಟರು. ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮೇ 9ರಂದು ಚಿತ್ರದುರ್ಗದಲ್ಲಿ ಯಡಿಯೂರಪ್ಪರ ಅಭಿಮಾನೋತ್ಸವ ಹಮ್ಮಿಕೊಂಡಿದೆ, ಮುಳಬಾಗಿಲು ತಾಲೂಕಿನಿಂದ ಸಾವಿರ ಕಾರ್ಯಕರ್ತರು ತೆರಳುತ್ತಿದ್ದೇವೆಂದು ತಿಳಿಸಿದರು. ಯಡಿಯೂರಪ್ಪ ಸಿಎಂ ಆಗಿದ್ದಾಗ ರಾಜ್ಯದಲ್ಲಿ ದೇವಸ್ಥಾನ, ಮಠ, ಮಸೀದಿ ಚರ್ಚ್‌ಗಳಿಗೆ ವಿಶೇಷ ಅನುದಾನ ನೀಡಿದ್ದಲ್ಲದೆ ರಾಜ್ಯದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದ್ದಾರೆ ಎಂದು ನುಡಿದರು. ಸುದ್ದಿಗೋಷ್ಠಿಯಲ್ಲಿ ಮಾವು ಅಭಿವೃದ್ಧಿ ಮಂಡಳಿ ಮಾಜಿ ಉಪಾಧ್ಯಕ್ಷ ಎಂ.ಕೆ. ವಾಸುದೇವ್, ಮುಖಂಡರಾದ ಕಾಪರ್ತಿ ಅಮರ್, ನಂಗ್ಲಿ ವಿಶ್ವನಾಥ್ ರೆಡ್ಡಿ, ಕೋಳಿ ನಾಗರಾಜ್, ಮೈಕ್ ಶಂಕರ್, ಪ್ರಕಾಶ್ ರೆಡ್ಡಿ, ಸೋಮಶೇಖರ್, ಮಂಜುನಾಥ್, ಗಂಗಾಧರ್, ಲಕ್ಷ್ಮೀನಾರಾಯಣಶೆಟ್ಟಿ ಇದ್ದರು.

ಆಗ್ನೇಯ ಪದವೀಧರ ಕ್ಷೇತ್ರ: ಸಯ್ಯದ್ ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕೆ

ಚಿಂತಾಮಣಿ: ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್ ಸಾಮಾನ್ಯ ಕಾರ್ಯಕರ್ತರನ್ನು ಮತ್ತು ತಳಮಟ್ಟದ ಆಕಾಂಕ್ಷಿಗಳನ್ನು ಕಡೆಗಣಿಸಿರುವ ಕಾರಣ ಈ ಬಾರಿ ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕಿಳಿಯುವುದಾಗಿ ವಕೀಲ ಸಯ್ಯದ್ ಜಹೀರ್‌ಬರೀದ್ ಘೋಷಿಸಿದ್ದಾರೆ. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ವಿಧಾನಸಭಾ ಕ್ಷೇತ್ರದ ಮಟ್ಟಿಗೆ ತಾವು ಸಚಿವ ಡಾ.ಎಂ.ಸಿ. ಸುಧಾಕರ್ ಅವರ ಬೆಂಬಲಿಗರಾಗಿದ್ದರೂ, ಕಾಂಗ್ರೆಸ್ ಪಕ್ಷದ ಆಡಳಿತ ಶೈಲಿ ಮತ್ತು ಹೈಕಮಾಂಡ್ ಧೋರಣೆಯ ವಿರುದ್ಧ ಗಂಭೀರ ಅಸಮಾಧಾನ ಹೊರಹಾಕಿದರು. 2025ರ ಅಕ್ಟೋಬರ್‌ನಲ್ಲಿ ಚುನಾವಣೆ ಘೋಷಣೆ ಯಾದಾಗಿನಿಂದಲೂ ನಾವು ಕ್ಷೇತ್ರದಲ್ಲಿ ಹಗಲಿರುಳು ಮತದಾರರ ನೋಂದಣಿ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದೇನೆ. ಆದರೆ, ಆಕಾಂಕ್ಷಿಗಳಿಗೆ ಅರ್ಜಿ ಸಲ್ಲಿಸಲು ಕನಿಷ್ಠ ಅವಕಾಶವನ್ನೂ ನೀಡದೆ, ಪಕ್ಷವು ಏಕಾಏಕಿ ಅಭ್ಯರ್ಥಿ ಅಂತಿಮಗೊಳಿಸಿ ಬಿ-ಫಾರಂ ನೀಡಿರುವುದು ಸಾಮಾನ್ಯ ಕಾರ್ಯಕರ್ತರಿಗೆ ಮಾಡಿದ ಅವಮಾನವಾಗಿದೆ. ಕಾಂಗ್ರೆಸ್‌ನಲ್ಲಿ ಸಾಮಾನ್ಯ ಕಾರ್ಯ ಕರ್ತರಿಗೆ ಬೆಲೆ ಇಲ್ಲದಂತಾಗಿದೆ ಎಂದು ದೂರಿದರು. ಈ ಸಂದರ್ಭದಲ್ಲಿ ವಕೀಲರಾದ ವಿ. ನವೀನ್ ಕುಮಾರ್, ವಾಸೀಮ್ ಖಾನ್, ಹಾದಿಗೆರೆ ಗ್ರಾ.ಪಂ.ಮಾಜಿ ಸದಸ್ಯ ಮೊಹಮ್ಮದ್ ಇನಾಯುತ್ತು ಲ್ಲಾ, ಸಿಕಂದರ್, ಜಬಿ ಉಲ್ಲಾ, ಕಾಚಹಳ್ಳಿ ನಿಜಾಮ್ ಉಲ್ಲಾ ಖಾನ್ ಇದ್ದರು.

ಪರಿಸರ ರಕ್ಷಣೆ ತೋರಿಕೆ, ಫ್ಯಾಷನ್ ಆಗಬಾರದು

ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ಅಭಿಪ್ರಾಯ | ಜಾಗತಿಕ ತಾಪಮಾನ ಸಂವಾದ, ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ

• **ಕನ್ನಡಪ್ರಭ ವಾರ್ತೆ** ಕೋಲಾರ

ಸಸಿ ಕೊಡುವ, ಸಸಿ ನೆಡುವ ಕಾರ್ಯಕ್ರಮ ಒಂದು ಫ್ಯಾಷನ್ ಆಗಿದೆ. ಅವುಗಳಲ್ಲಿ ಎಷ್ಟು ಸಸಿಗಳು ಹೆಮ್ಮರಗಳಾಗಿವೆ ಎಂಬ ವೈಜ್ಞಾನಿಕ ಅವಲೋಕನ ಮಾಡುತ್ತಿಲ್ಲ, ಪ್ರತಿಯೊಬ್ಬ ಮನುಷ್ಯ ನಿಸರ್ಗದೊಂದಿಗೆ ಹೇಗೆ ಅನುಸಂಧಾನ ಮಾಡಬೇಕೆಂಬುದನ್ನು ಸಣ್ಣ ಮಕ್ಕಳಿಂದಲೇ ಕಲಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ಅಭಿಪ್ರಾಯಪಟ್ಟರು.

ಗುರುವಾರ ನಗರದಲ್ಲಿ ಮನ್ವಂತರ ಪ್ರಕಾಶನ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವಿಜಯ ಉನ್ನತಿ ಸೇವಾ ಟ್ರಸ್ಟ್‌ನಿಂದ ಜಾಗತಿಕ ತಾಪಮಾನ ಕುರಿತ ಸಂವಾದ ಹಾಗೂ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪರಿಸರ ರಕ್ಷಣೆ ಎನ್ನುವುದು ಕೇವಲ ತೋರಿಕೆ, ಫ್ಯಾಷನ್ ಆಗಬಾರದು. ನಾವು ಹಾಕುವ ಪ್ರತಿಯೊಂದು ಸಸಿಯೂ ಮರವಾಗಿ ಬೆಳೆಯುವವರೆಗೂ ಅದರ ಜವಾಬ್ದಾರಿ ಹೊರಬೇಕು, ನಾವು ನಮ್ಮ ಮಕ್ಕಳನ್ನು ವಿದ್ಯಾವಂತರಾಗಿ ಮಾಡುತ್ತಿದ್ದೇವೆ. ಆದರೆ, ಅವರನ್ನು ಬುದ್ಧಿವಂತರಾಗಿ ಮಾಡಬೇಕಾದ ಹೊಣೆ ನಮ್ಮೆಲ್ಲರ ಮೇಲಿದೆ ಎಂದರು.



ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕೂ ಹೆಚ್ಚು ಅಂಕ ಗಳಿಸಿದ ವಿಶೇಷಚೇತನ ವಿದ್ಯಾರ್ಥಿ ಸಿ.ಸಿ. ಚರಣ್ ಅವರನ್ನು ಸನ್ಮಾನಿಸಲಾಯಿತು. ಡಿ.ಸಿ. ಡಾ. ಎಂ.ಆರ್. ರವಿ, ಪ್ರೊ.ಬಿ.ಕೆ. ರವಿ ಮತ್ತಿತರರು ಇದ್ದರು.

ಜಿಲ್ಲೆಯ ತಾಪಮಾನ ಏರಿಕೆ ಕುರಿತು ಆತಂಕ ವ್ಯಕ್ತಪಡಿಸಿದ ಜಿಲ್ಲಾಧಿಕಾರಿ, ಕಳೆದ ಐದು ವರ್ಷಗಳಲ್ಲಿ ಕೋಲಾರದ ಉಷ್ಣಾಂಶವು 30 ಡಿಗ್ರಿ ಸೆ.ನಿಂದ ಸುಮಾರು 40ಡಿಗ್ರಿ ಸೆ.ವರೆಗೆ ಏರಿದೆ ಎಂದು ಅಂಕಿಅಂಶಗಳ ಸಮೇತ ವಿವರಿಸಿದರು. ನಮ್ಮ ಜಿಲ್ಲೆಯಲ್ಲಿ ಕೆರೆಕಟ್ಟೆಗಳೇ ಬದುಕಿನ ಆಧಾರ. ಆದರೆ ಅತಿಯಾದ ನಗರೀಕರಣ ಮತ್ತು ಅವೈಜ್ಞಾನಿಕ ಯೋಜನೆಗಳಿಂದಾಗಿ ಪರಿಸರದ ಸಮತೋಲನ ತಪ್ಪುತ್ತಿದೆ ಎಂದು ಅವರು ವಿಷಾದಿಸಿದರು.

ಸುವರ್ಣ ಗಂಗೆ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ. ರವಿ ಮಾತನಾಡಿ, ಜಾಗತಿಕ ತಾಪಮಾನ ಎನ್ನುವುದು ಕೇವಲ ಸರ್ಕಾರದ ಸಮಸ್ಯೆಯಲ್ಲ, ಅದು ಮನುಕುಲದ ಅಸ್ತಿತ್ವದ ಪ್ರಶ್ನೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕೂ ಹೆಚ್ಚು ಅಂಕ ಗಳಿಸಿದ ವಿಶೇಷಚೇತನ ವಿದ್ಯಾರ್ಥಿ ಸಿ.ಸಿ. ಚರಣ್ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷ ಕೆ.ಎಸ್. ಗಣೇಶ್, ಪಾ.ಶ್ರೀ. ಅನಂತರಾಮ್, ಎಸ್. ಮಂಜುನಾಥ್, ಎಂ. ಮುರಳಿ, ಮಾಮಿ ಪ್ರಕಾಶ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ವಿ. ಮುನಿರಾಜು, ಜಿಲ್ಲಾ ಅಧ್ಯಕ್ಷ ಎಸ್.ಕೆ. ಚಂದ್ರಶೇಖರ್, ಪ್ರಧಾನ ಕಾರ್ಯದರ್ಶಿ ಎ.ಜಿ. ಸುರೇಶ್ ಕುಮಾರ್, ಖಜಾಂಚಿ ರಾಜೇಂದ್ರ ಸಿಂಹ, ಉಪಾಧ್ಯಕ್ಷ ಎಸ್. ರವಿಕುಮಾರ್, ಕಾರ್ಯದರ್ಶಿ ಶಮ್ಗರ್, ಉಪನ್ಯಾಸಕ ಹರೀಶ್, ಶಸಾಪ ಅಧ್ಯಕ್ಷ ಬಿ. ಸುರೇಶ್, ಗಮನ ಶಾಂತಮ್ಮ, ಸ್ಫೂರ್ತಿ, ಮಹಿಳಾ ಸಂಚಾಲಕಿ ಮಂಜುಳಾ ಸಿ.ವಿ. ನಾಗರಾಜ್, ತಿರುಮಲೇಶ್, ಎನ್. ಸತೀಶ್ ಗೌಡ, ಮಂಜುಳಾ, ರೇಷ್ಮೆ ಇಲಾಖೆ ಉಪ ನಿರ್ದೇಶಕ ಆಂಜನೇಯ ರೆಡ್ಡಿ, ಮನ್ವಂತರ ಮೀಡಿಯಾ ಟೀಂ ಆಸಿಫ್‌ಪಾಷ ಪಾಲ್ಗೊಂಡಿದ್ದರು.

ಗ್ರಾಮೀಣ ಪ್ರತಿಭೆ ಅನಾವರಣಕ್ಕೆ ಸರ್ಕಾರ ಸ್ಪಂದಿಸಲಿ

ಮಾಲೂರಲ್ಲಿ ಬೇಸಿಗೆ ಶಿಬಿರದ ಸಮಾರೋಪದಲ್ಲಿ ವಿಜಯಲಕ್ಷ್ಮಿ ಲೋಕೇಶ್ ಅಭಿಮತ

• **ಕನ್ನಡಪ್ರಭ ವಾರ್ತೆ,** ಮಾಲೂರು

ಇಂದಿನ ಮೊಬೈಲ್ ಯುಗದಲ್ಲಿ ಮಕ್ಕಳನ್ನು ಜಾನಪದದತ್ತ ಸೆಳೆಯುತ್ತಿರುವ ಸಾರಂಗರಂಗ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ ಲೋಕೇಶ್ ಹೇಳಿದರು.

ಅವರು ಇಲ್ಲಿನ ಸಮತ ನಗರದ ಶ್ರೀ ಆಂಜನೇಯ ಸ್ವಾಮಿ ಆವರಣದ ಸಾರಂಗರಂಗ ಮಂದಿರದಲ್ಲಿ ಹಮ್ಮಿಕೊಂಡಿದ್ದ 20 ದಿನಗಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ನೆಲದ ಸಂಸ್ಕೃತಿ ಉಳಿಯಬೇಕಾದರೆ ಇಂತಹ ಶಿಬಿರಗಳು ಪ್ರತಿ ಗ್ರಾಮಗಳಲ್ಲೂ ನಡೆಯಬೇಕು. ಸರ್ಕಾರ ಸಹ ಇಂತಹ ಸಂಸ್ಥೆಗಳಿಗೆ ಸಹಕಾರ ನೀಡುವ ಮೂಲಕ ಗ್ರಾಮೀಣ ಪ್ರತಿಭೆಗಳನ್ನು ಅನಾವರಣಗೊಳಿಸಬೇಕು ಎಂದು ಅವರು ನುಡಿದರು.

ನಿವೃತ್ತ ಪೊಲೀಸ್ ಅಧಿಕಾರಿ ಬಿ.ಕೆ. ಶಿವರಾಂ ಮಾತನಾಡಿ ಸಂಸ್ಕೃತಿ ಉಳಿಸಿದವರು ಸಮಾಜ ಉಳಿಸಿದಂತೆ. ಈ ನಿಟ್ಟಿನಲ್ಲಿ ಸಂಸ್ಥೆಯ ಮುಖ್ಯಸ್ಥ ಪಿ ಶ್ರೀನಿವಾಸ್ ಅವರ ಸೇವೆ ಅನುಕರಣೀಯ ಎಂದರು. ಸಂಸ್ಥೆಯ ಮುಖ್ಯಸ್ಥ ಪಿಚ್ಚಳ್ಳಿ ಶ್ರೀನಿವಾಸ್ ಮಾತನಾಡಿ ನಮ್ಮ ನೆಲದ ಕಲೆ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾಯಕ ನನ್ನ ಜೀವನದ ಒಂದು ಭಾಗವಾಗಿದೆ.



ಮಾಲೂರಿನ ಸಾರಂಗರಂಗ ಮಕ್ಕಳಿಗಾಗಿ ಹಮ್ಮಿಕೊಂಡಿದ್ದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ನಿವೃತ್ತ ಪೊಲೀಸ್ ಅಧಿಕಾರಿ ಬಿ.ಕೆ. ಶಿವರಾಂ ಮಾತನಾಡಿದರು. ವಿಜಯಲಕ್ಷ್ಮಿ ಲೋಕೇಶ್ ಮತ್ತಿತರರು ಹಾಜರಿದ್ದರು.

ಇದರಲ್ಲಿ ಲಾಭ-ನಷ್ಟದ ಲೆಕ್ಕವಿಲ್ಲ. ಮಕ್ಕಳ ನಗು ಕಲಿಕೆಯೇ ನನಗೆ ಆರೋಗ್ಯ ಮತ್ತು ನೆಮ್ಮದಿ ಎಂದರು. ಖ್ಯಾತ ಸಾಹಿತಿ ಕವಿ ಕೆ.ವೈ. ನಾರಾಯಣಸ್ವಾಮಿ, ಸಂವಿಧಾನ ಓದು ಮುಖ್ಯಸ್ಥ ಜೆ.ಜಿ. ಶ್ರೀನಿವಾಸಮೂರ್ತಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಕವಿ ಡಾ.ಕೆ.ವೈ.ನಾರಾಯಣಸ್ವಾಮಿ ಅವರನ್ನು ಸನ್ಮಾನಿಸಲಾಯಿತು.

ನಂತರ ನಡೆದ ಸಾಂಸ್ಕೃತಿಕ ಸಂಜೆಯಲ್ಲಿ ಶಿಬಿರದ ಮಕ್ಕಳು ಕಾಗೆ ಕಣ್ಣು-ಇರುವೆ ಬಲ ಎಂಬ ಸಾಮಾಜಿಕ ಸಂದೇಶದ ನಾಟಕ ಪ್ರದರ್ಶಿಸಿದರು. ಚುರುಕಿನ ಕೋಲಾಟ, ಡೊಳ್ಳು ಕುಣಿತ ಹಾಗೂ ಅಪರೂಪದ ತಟ್ಟೆ ಡ್ಯಾನ್ಸ್ ಪ್ರದರ್ಶನ ನೆರೆದಿದ್ದ ಪೋಷಕ ವರ್ಗದವರನ್ನು ಸೆಳೆಯಿತು. ಶಿಬಿರದಲ್ಲಿ ಭಾಗವಹಿಸಿದ ಎಲ್ಲ ಅರವತ್ತು ಮಕ್ಕಳಿಗೂ ಕಾಣಿಕೆ ನೀಡಲಾಯಿತು.

ಬೇತಮಂಗಲದಲ್ಲಿ ಸರ್ಕಾರಿ ಶಾಲಾ ದಾಖಲಾತಿ ಪ್ರಚಾರ ಆಂದೋಲನ

ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಚಾಲನೆ

• **ಕನ್ನಡಪ್ರಭ ವಾರ್ತೆ** ಬೇತಮಂಗಲ

2026-27ನೇ ಸಾಲಿನ ಶೈಕ್ಷಣಿಕ ವರ್ಷದ ಅಂಗವಾಗಿ ಸರ್ಕಾರಿ ಶಾಲೆಗಳ ದಾಖಲಾತಿ ಹಬ್ಬ ಹಾಗೂ ಪ್ರಚಾರ ಆಂದೋಲನಕ್ಕೆ ಕೆಜಿಎಫ್ ಬಿಇಒ ನಾರಾಯಣಸ್ವಾಮಿ ಚಾಲನೆ ನೀಡಿದರು.



ಆಂದೋಲನಕ್ಕೆ ಬಿಇಒ ನಾರಾಯಣ ಸ್ವಾಮಿ ಚಾಲನೆ ನೀಡಿದರು.

ಬೇತಮಂಗಲ ಅಂಬೇಡ್ಕರ್‌ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮುಖಂಡರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಪಿ.ಎಂ.ಶ್ರೀ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಉರ್ದು ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿಯೇ 1 ರಿಂದ 7ನೇ ತರಗತಿವರೆಗೆ ಕನ್ನಡ ಮತ್ತು ಉರ್ದು ಮಾಧ್ಯಮಗಳಲ್ಲಿ ಪ್ರವೇಶಾತಿ ಮುಕ್ತವಾಗಿದೆ ಎಂದು ಘೋಷಿಸಲಾಯಿತು.

ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕಾಗಿ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಮಧ್ಯಾಹ್ನದ ಬಿಸಿಯೂಟ ಹಾಗೂ ನುರಿತ ಶಿಕ್ಷಕರಿಂದ ಗುಣಮಟ್ಟದ ಶಿಕ್ಷಣ ನೀಡಲಾಗುವುದು ಎಂದು ನಾರಾಯಣಸ್ವಾಮಿ ತಿಳಿಸಿದರು.

ಕೆಜಿಎಫ್ ತಾಲೂಕಿನ ಪ್ರತಿಯೊಂದು ಭಾಗದಲ್ಲಿ ಸರ್ಕಾರಿ ಶಾಲೆಗಳಲ್ಲಿ ದೊರೆಯುವ ಶಿಕ್ಷಣ ಹಾಗೂ ಸೌಲಭ್ಯಗಳ ಬಗ್ಗೆ ಪೋಷಕರಲ್ಲಿ ಜಾಗೃತಿ ಮೂಡಿಸುವ ಮೂಲಕ ದಾಖಲಾತಿ ಆಂದೋಲನ ಕೈಗೊಂಡಿದೆ ಎಂದು ಅವರು ತಿಳಿಸಿದರು.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್‌ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್‌ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

ಗರಿಷ್ಠ 32°c | ಕನಿಷ್ಠ 22°c

ಸುದ್ದಿ ಸಿಂಚನ

ನೀರಿನ ಸಮಸ್ಯೆ ನೀಗಿಸಲು ಮುನ್ನೆಚ್ಚರಿಕೆಗೆ ಸೂಚನೆ

ಬೇತಮಂಗಲ: ಸಮೀಪದ ಕಂಗಾಂಡ್ಲಹಳ್ಳಿ ಗ್ರಾಪಂ ಕಚೇರಿಯಲ್ಲಿ ತಾಪಂ ಇಒ ವೆಂಕಟೇಶ್ ಅಧ್ಯಕ್ಷತೆಯಲ್ಲಿ ನೀರಿನ ಆದಾಲತ್ ಹಮ್ಮಿಕೊಳ್ಳಲಾಗಿತ್ತು. ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಗ್ರಾಪಂ ವ್ಯಾಪ್ತಿಯಲ್ಲಿ ನಿರ್ಮಿಸಲಾಗಿರುವ ನೀರಿನ ತೊಟ್ಟಿಗಳಿಗೆ ನಿಯಮಿತವಾಗಿ ನೀರು ಹರಿಸುತ್ತಿರುವು ದನ್ನು ವೆಂಕಟೇಶ್ ಪರಿಶೀಲಿಸಿದರು. ಬೇಸಿಗೆಯಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾ ಗದಂತೆ ಈಗಾಗಲೇ ಅಗತ್ಯವಿರುವ ಎಲ್ಲಾ ಮುಂಜಾ ಗ್ರತಾ ಕ್ರಮ ಕೈಗೊಂಡಿದೆ ಎಂದು ಭರವಸೆ ನೀಡಿದರು. ಬೇಸಿಗೆ ಹಿನ್ನೆಲೆಯಲ್ಲಿ ಸಾರ್ವಜನಿಕರು ಲಭ್ಯವಿರುವ ನೀರನ್ನು ಅತ್ಯಂತ ಮಿತವಾಗಿ ಮತ್ತು ಜವಾಬ್ದಾರಿಯಿಂದ ಬಳಸಬೇಕು. ಗ್ರಾಮಗಳಲ್ಲಿ ನೀರಿನ ಸಮಸ್ಯೆ ಕಂಡು ಬಂದಲ್ಲಿ ತಕ್ಷಣವೇ ಗ್ರಾಪಂ ಕಚೇರಿಗೆ ಮಾಹಿತಿ ನೀಡ ಬೇಕು ಎಂದು ಹೇಳಿದರು. ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಮುಖ್ಯವಾಗಿ ಮೂಕ ಪ್ರಾಣಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದ್ದು, ನರೇಗಾ ಅಡಿಯಲ್ಲಿ ನಿರ್ಮಿಸಲಾಗಿರುವ ನೀರಿನ ತೊಟ್ಟಿಗಳಿಗೆ ನೀರನ್ನು ತುಂಬಿ ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಿದೆ ಎಂದು ಪಿಡಿಒ ವೈಶಾಲಿ ಸಾಗರ್ ಹೇಳಿದರು. ಆಡಳಿತ ಅಧಿಕಾರಿ ಎಇಇ ರಾಜಶೇಖರ್ ಹರೀಶ್, ಡಿಇಒ ಹರೀಶ್ ಇದ್ದರು.

ಕ್ರಿಕೆಟ್ ಟೂರ್ನಿ: ಮಾಲೂರು ತಂಡಕ್ಕೆ ಪ್ರಥಮ ಬಹುಮಾನ

ಕೋಲಾರ: ತಾಲೂಕಿನ ಕೊರಗಂಡಹಳ್ಳಿಯಲ್ಲಿ ನಡೆದ ಜಿಲ್ಲಾ ಮಟ್ಟದ ಶಿಕ್ಷಕರು ಮತ್ತು ಉಪನ್ಯಾಸಕರ ಕ್ರಿಕೆಟ್ ಪಂದ್ಯಾವಳಿಯಲ್ಲಿ ಮಾಲೂರು ತಂಡ ಪ್ರಥಮ ಬಹುಮಾನ ಹಾಗೂ ಕೋಲಾರ ಎಸ್.ಡಿ.ಸಿ ಕಾಲೇಜು ದ್ವಿತೀಯ ಬಹುಮಾನ ಪಡೆದಿದೆ. ಟೂರ್ನಿಯಲ್ಲಿ ಕೋಲಾರ ಜಿಲ್ಲೆಯ 12 ತಂಡಗಳು ಭಾಗವಹಿಸಿದ್ದವು. ವ್ಯವಸ್ಥಾಪಕರಾದ ಅಂಬ್ಲಿಕಲ್ ಮಂಜುನಾಥ್, ನುಕ್ಕನಹಳ್ಳಿ ಗೋಪಿನಾಥ್, ರಮೇಶ್, ಜಾವೇದ್, ಸುಬ್ರಮಣಿ, ಶಾಮೀರ್ ಪಾಷಾ, ಪೃಥ್ವಿಜ ಟೂರ್ನಿ ಆಯೋಜಿಸಿದ್ದರು. ಡಿಐಜಿಪಿ ಡಿ.ದೇವರಾಜ, ಹೂಡಿ ವಿಜಯಕುಮಾರ್, ಸುಧಾಕರ್, ತೂಪಲ್ಲಿ ಚೌಡರೆಡ್ಡಿ, ನಾಗರಾಜ್, ನೀಲಾ ವತಿ, ಉಷಾ ಗಂಗಾಧರ, ಸಂತೃಪ್ತಿ ಬೇಕರಿ ವರುಣ್, ಹರಿನಾಥರಾವ್, ಪುಷ್ಪಲತಾ ಮತ್ತಿತರರು ಟೂರ್ನಿಗೆ ಪ್ರೋತ್ಸಾಹ ನೀಡಿದರು.

ಕೆಎಸ್ಸಾರ್ಟಿಸಿಯಲ್ಲಿ ಶಿಶಿಕ್ಷು ಹುದ್ದೆಗಳಿಗೆ ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ: ಕೆಎಸ್ಸಾರ್ಟಿಸಿ ಚಿಕ್ಕಬಳ್ಳಾಪುರ ವಿಭಾಗ ದಲ್ಲಿ ಶಿಶಿಕ್ಷು ಅಧಿನಿಯಮ 1961 ರನ್ವಯ ಮೆಕ್ಯಾನಿಕ್ ಡಿಸೇಲ್-70 ಫಿಟ್ಟರ್-40ಎಲೆಕ್ಟ್ರಿಷಿಯನ್-30 ವೆಲ್ಡರ್- 15 ಮತ್ತು ಕೋಪ-10 ತಾಂತ್ರಿಕ ವೃತ್ತಿಗಳಲ್ಲಿ ಪೂರ್ಣ ಅವಧಿಯ ತರಬೇತಿ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ವಿವಿಧ ವೃತ್ತಿಗಳಿಗೆ ನಿಗಧಿಪಡಿಸಿರುವ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಆನ್-ಲೈನ್ ಮೂಲಕ www.apprenticeship.org ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಮೇ 31 ರೊಳಗೆ ಸಲ್ಲಿಸಬಹುದು. ತರಬೇತಿ ಅವಧಿಯಲ್ಲಿ ತರಬೇತಿ ಭತ್ಯೆ ನೀಡಲಾಗುವುದು. ಅಭ್ಯರ್ಥಿಗಳು ಆನ್ ಲೈನ್ ಅರ್ಜಿಯೊಂದಿಗೆ ಜನ್ಮ ದಿನಾಂಕ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳ ಮೂಲ ಪ್ರತಿ ಮತ್ತು ಒಂದು ಸೆಟ್ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸುವುದು. ಎಲ್ಲಾ ಅಭ್ಯರ್ಥಿಗಳಿಗೆ ಸಂಬಂಧಪಟ್ಟಂತೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ಇತ್ತೀಚಿನ ಭಾವಚಿತ್ರವನ್ನು ಅರ್ಜಿಗೆ ಅಂಟಿಸಿ, ಅರ್ಜಿಯೊಂದಿಗೆ ಮೇ 31 ರಂದು ಸಂಜೆ 5 ಗಂಟೆಯೊಳಗೆ ವಿಭಾಗೀಯ ಕಚೇರಿ, ಕ.ರಾ.ರ.ಸಾ.ನಿಗಮ ಚಿಕ್ಕಬಳ್ಳಾಪುರ ಇಲ್ಲಿ ಹಾಜರಾಗಿ ಸಲ್ಲಿಸಬಹುದು.

ಕದ್ದಿದ್ದ ಮಾಂಗಲ್ಯ ಸರ ಮನೆ ಮುಂದೆ ಪ್ರತ್ಯಕ್ಷ!

ಚಿಕ್ಕಬಳ್ಳಾಪುರ: ನಗರದಲ್ಲಿ ವಿಚಿತ್ರ ಘಟನೆಯೊಂದು ನಡೆದಿದೆ. ದುಷ್ಕರ್ಮಿಗಳು ತಾವು ಕದ್ದ ಮಾಂಗಲ್ಯ ಸರವನ್ನು ವಾಪಸ್ ಮನೆ ಮುಂದೆ ಬಿಸಾಕಿ ಹೋದ ಘಟನೆ ನಡೆದಿದೆ. ಮನೆ ಮುಂದೆ ಚಿನ್ನದ ಸರ ಕಂಡು ಮಹಿಳೆ ಆಶ್ಚರ್ಯಚಕಿತರಾಗಿದ್ದಾರೆ. ಮೇ 3 ಭಾನುವಾರ ಸಂಜೆ ಚಾಮರಾಜಪೇಟೆಯ ವಾರ್ಡ್ 23ರ ಪ್ರಗತಿ ಕೃಷ್ಣಾ ಗ್ರಾಮೀಣ ಬ್ಯಾಂಕ್ ಪಕ್ಕದ ರಸ್ತೆ ನಿವಾಸಿ ಪ್ರಿಯಾ ಮನೆ ನೀರಿನ ಸಂಪ್ ನೋಡುತ್ತಿದ್ದಾಗ ಪಲ್ಸರ್ ಬೈಕ್‌ನಲ್ಲಿ ಬಂದ ಇಬ್ಬರು ಸರ ಕಸಿದು ಪರಾರಿಯಾಗಿದ್ದರು.



ಕೋಲಾರ ತಾಲೂಕು ಕೊರಗಂಡಹಳ್ಳಿಯಲ್ಲಿ ನಡೆದ ಜಿಲ್ಲಾ ಮಟ್ಟದ ಶಿಕ್ಷಕರು ಮತ್ತು ಉಪನ್ಯಾಸಕರ ಕ್ರಿಕೆಟ್ ಪಂದ್ಯಾವಳಿಯಲ್ಲಿ ಗೆಲುವು ಸಾಧಿಸಿದ ತಂಡದವರು ತಾವು ಪಡೆದ ಟ್ರೋಫಿಗಳೊಂದಿಗೆ. ತಂಡದ ವ್ಯವಸ್ಥಾಪಕ ಅಂಬ್ಲಿಕಲ್ ಮಂಜುನಾಥ್, ನುಕ್ಕನಹಳ್ಳಿ ಗೋಪಿನಾಥ್, ರಮೇಶ್ ಮತ್ತಿತರರು ಇದ್ದಾರೆ.



ಬೇತಮಂಗಲ ಸಮೀಪದ ಕಂಗಾಂಡ್ಲಹಳ್ಳಿ ಗ್ರಾಪಂನಲ್ಲಿ ನೀರಿನ ತೊಟ್ಟಿಗಳಿಗೆ ನಿಯಮಿತವಾಗಿ ನೀರು ಹರಿಸುತ್ತಿರುವುದನ್ನು ತಾಪಂ ಇಒ ವೆಂಕಟೇಶ್ ಪರಿಶೀಲಿಸಿದರು. ಪಿಡಿಒ ವೈಶಾಲಿ ಸಾಗರ್, ಎಇಇ ರಾಜಶೇಖರ್, ಕರವಸೂಲಿಗಾರ ಹರೀಶ್, ಡಿಇಒ ಹರೀಶ್ ಇದ್ದರು.

ಹೊಸ ಗುರುಭವನದಲ್ಲಿ ಶಿಕ್ಷಕರ ದಿನಾಚರಣೆ: ನಂಜೇಗೌಡ ಭರವಸೆ

ಟೇಕಲ್: ಮುಂದಿನ ಶಿಕ್ಷಕರ ದಿನಾಚರಣೆ ನೂತನ ಗುರುಭವನದಲ್ಲಿ ನಡೆಯಬೇಕೆಂಬ ನಿಮ್ಮೆಲ್ಲರ ಬಯಕೆ ಆದಷ್ಟು ಮಟ್ಟಿಗೆ ಈಡೇರಿಸಲಾಗುತ್ತದೆ ಎಂದು ಶಾಸಕ ಕೆ.ವೈ.ನಂಜೇಗೌಡ ತಿಳಿಸಿದರು. ಅವರು ಟೇಕಲ್‌ನ ಕೊಮ್ಮನಹಳ್ಳಿ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರು ನೀಡಿದ ಅಭಿನಂದನೆ ಸ್ವೀಕರಿಸಿ ಮಾತನಾಡಿದರು. ಮುಂದಿನ ಶಿಕ್ಷಕ ದಿನಾಚರಣೆ ಮಾಲೂರು ತಾಲೂಕಿನಲ್ಲಿ ಅದ್ದೂರಿಯಾಗಿ ಮಾಡಲಾಗುವುದು, ಈ ಬಾರಿ ಜಿಲ್ಲೆಯಲ್ಲಿ ತಾಲೂಕು ಎಸ್‌ಎಸ್‌ಎಲ್‌ಸಿ ಫಲಿತಾಂಶ 2ನೇ ಸ್ಥಾನ ನೀಡಿದ ಶಿಕ್ಷಕಕರಿಗೆ ಅವರು ಧನ್ಯವಾದ ತಿಳಿಸಿದರು. ಶಿಕ್ಷಕರಾದ ರವಿಕುಮಾರ್, ಎಂ.ಜಿ.ನಾಗರಾಜ್, ನಂದೀಶ್ವರ.ಎ, ಸುರೇಶ್ ಎಚ್.ಇ, ಸಿ.ಎಂ. ನಾರಾಯಣಸ್ವಾಮಿ, ಮುನಿಯಪ್ಪ.ಜಿ, ಶಶಿಧರ್.ಕೆ, ಸುರೇಶ್ ಕುಮಾರ್.ಕೆ, ಶ್ರೀನಾಥ್ ಎಚ್.ವಿ, ಮಹಿಳಾ ಮೀಸಲಿಂದ ಲಕ್ಷ್ಮಿ.ಎನ್, ಕಾಂತ ಮ್ಮ.ವಿ, ಕೆ.ಚಂದ್ರಕಲಾ, ಕಾಂತಮ್ಮ.ವಿ, ರಾಜಮ್ಮ ಎಲ್.ಕೆ, ಜಿ.ಪಂ ಮಾಜಿ ಅಧ್ಯಕ್ಷೆ ರತ್ನಮ್ಮ ನಂಜೇಗೌಡ, ಶಿಕ್ಷಕರ ಸಂಘದ ವೆಂಕಟೇಶ್ ಗೌಡ, ಸಂಜೀವಪ್ಪ, ವೀರಸ್ವಾಮಿ, ವೆಂಕಟಸ್ವಾಮಿ ಇದ್ದರು.

ಎಸ್ಸಿ, ಎಸ್ಟಿ, ಒಬಿಸಿ ಮೀಸಲಾತಿಗೆ ಹೋರಾಟಕ್ಕೆ ಸಿದ್ಧ

ಕೇಂದ್ರ, ರಾಜ್ಯ ಸರ್ಕಾರಕ್ಕೆ ವಿ.ಎಸ್. ಉಗ್ರಪ್ಪ ಎಚ್ಚರಿಕೆ | ಮೀಸಲು ಪ್ರಮಾಣ ಶೇ.56ಕ್ಕೆ ಹೆಚ್ಚಿಸಲು ಆಗ್ರಹ | ಶೀಘ್ರವೇ ಕೇಂದ್ರಕ್ಕೆ ನಿಯೋಗ

• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ

ಪರಿಶಿಷ್ಟ ಜಾತಿ, ಪಂಗಡ ಮತ್ತು ಇತರೆ ಹಿಂದುಳಿದ ಜಾತಿಗಳ ಮೀಸಲು ಪ್ರಮಾಣವನ್ನು ಶೇ.56ಕ್ಕೆ ಹೆಚ್ಚಳ ಮಾಡಿರುವ 2022 ರ ಕಾಯ್ದೆಯನ್ನು ಶೆಡ್ಯೂಲ್ 9 ಗೆ ಸೇರಿಸಲು ಆಗ್ರಹಿಸಿ ಯಾವುದೇ ಸ್ವರೂಪದ ಹೋರಾಟಕ್ಕೂ ವಾಲ್ಮೀಕಿ ನಾಯಕ ಸಮಾಜ ಸಿದ್ಧ ಎಂದು ಮಾಜಿ ಸಂಸದ, ಕರ್ನಾಟಕ ರಾಜ್ಯ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆ ಅಧ್ಯಕ್ಷ ಹಾಗೂ ಕೆಪಿಸಿಸಿ ಉಪಾಧ್ಯಕ್ಷ ವಿ.ಎಸ್. ಉಗ್ರಪ್ಪ ಕೇಂದ್ರ, ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದಾಗ ಎಸ್ಟಿ ಸಮುದಾಯಕ್ಕೆ ಶೇ.3ರಿಂದ 7 ಮತ್ತು ಎಸ್ಸಿ ಸಮುದಾಯಕ್ಕೆ ಶೇ.15ರಿಂದ 17ಕ್ಕೆ ಮೀಸಲಾತಿ ಹೆಚ್ಚಳ ಮಾಡಿ ಒಟ್ಟಾರೆಯಾಗಿ ಶೇ.50 ಇದ್ದ ಮೀಸಲಾತಿಯನ್ನು ಶೇ.56ಕ್ಕೆ ಹೆಚ್ಚಳ ಮಾಡಿದರು. ಆದರೆ, ಸಾಂವಿಧಾನಿಕ ಸಿಂಧುತ್ವ ಕೊಡಿಸುವ ಯಾವ ಮಾರ್ಗಗಳನ್ನೂ ಅನುಸರಿಸಲಿಲ್ಲ ಎಂದು ಆರೋಪಿಸಿದರು.

ಬೊಮ್ಮಾಯಿ ಅವರ ಅವಧಿಯಲ್ಲಿ ಕೇಂದ್ರ ಮತ್ತು ರಾಜ್ಯದಲ್ಲಿ ಬಿಜೆಪಿ ಸರ್ಕಾರಗಳೇ ಇದ್ದರೂ ಶೇ.56 ಮೀಸಲನ್ನು ಒಂಬತ್ತನೇ ಶೆಡ್ಯೂಲ್‌ಗೆ ಸೇರಿಸಿ, ಮೀಸಲಾತಿಗೆ ಸಾಂವಿಧಾನಿಕ ಸಿಂಧುತ್ವ ದೊರಕಿಸಲು ಮುತುವರ್ಜಿ ವಹಿಸಲಿಲ್ಲ. 2023ರಲ್ಲಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಸಹ ಈ ಬಗ್ಗೆ ಅನೇಕ ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಲಿಲ್ಲ. ಬರೀ ಮುಂದೂಡುವ ಕೆಲಸವಷ್ಟೇ ಆಯಿತು ಎಂದು ಉಗ್ರಪ್ಪ ಬೇಸರ ವ್ಯಕ್ತಪಡಿಸಿದರು.

2022 ರ ಕಾಯ್ದೆಯನ್ನು ಭಾರತದ ಸಂವಿಧಾನದ 9 ನೇ ಶೆಡ್ಯೂಲ್‌ಗೆ ಸೇರಿಸಲು ಮತ್ತು ಅನುಚ್ಛೇದ 15 ಮತ್ತು 16ಕ್ಕೆ ಮೀಸಲಾತಿ ಹೆಚ್ಚಿಸಲು ತಿದ್ದುಪಡಿ ತರಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿರುವುದಾಗಿ ಅವರು ಹೇಳಿದರು. ಹಾಗೇ ಪ್ರಧಾನಿ ಮೋದಿ ಅವರು ರಾಜ್ಯಕ್ಕೆ ಬಂದಾಗೆಲ್ಲ ಕೆಲ ಜಾತಿಗಳನ್ನು ಎಸ್ಟಿಗೆ ಸೇರಿಸುವ ಭರವಸೆ ನೀಡಿ ಜನರನ್ನು ದಿಕ್ಕು ತಪ್ಪಿಸಿದರು. ಇದರಿಂದ ಇಂದು ಸಾಕಷ್ಟು ಜನ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಹೆಸರಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರ ಪಡೆಯುತ್ತಿದ್ದಾರೆ. ಇದಕ್ಕೆ ಬಿಜೆಪಿ ಸರ್ಕಾರ ಹಾಗೂ ಬಿಜೆಪಿ ನಾಯಕರೇ ಕಾರಣ ಎಂದು ಉಗ್ರಪ್ಪ ಆರೋಪಿಸಿದರು.

ಎಸ್ಸಿ, ಎಸ್ಟಿ, ಒಬಿಸಿ ಮೀಸಲಾತಿ ಹೆಚ್ಚಿಸುವ ಸಂಬಂಧ ರಾಜ್ಯ ಸರ್ಕಾರ ಮುತುವರ್ಜಿ ವಹಿಸಿ ಸರ್ವ ಪಕ್ಷಗಳ ನಿಯೋಗದೊಂದಿಗೆ ಪ್ರಧಾನಿ ಭೇಟಿ ಮಾಡಿ ಒಂಬತ್ತನೇ ಶೆಡ್ಯೂಲ್‌ಗೆ ಸೇರಿಸಲು ಪ್ರಯತ್ನಿಸಬೇಕು. ಜೂನ್ ವೇಳೆಗೆ ರಾಜ್ಯ ಸರ್ಕಾರ ನಿಯೋಗ ತೆರಳದಿದ್ದರೆ ರಾಜ್ಯವ್ಯಾಪಿ ಅಹೋರಾತ್ರಿ ಪ್ರತಿಭಟನೆ ನಡೆಸಲಾಗುವುದು ಎಂದು ಅವರು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಯುವಹಳ್ಳಿ ರಮೇಶ್, ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಲಾಯರ್ ನಾರಾಯಣಸ್ವಾಮಿ, ಮುಖಂಡರಾದ ಎಂ. ನರಸಿಂಹಯ್ಯ, ರಾಜಪ್ಪ, ಬಾಬಣ್ಣ, ಜಿ. ಹನುಮಂತರಾಯಪ್ಪ, ಮೂರ್ತಿ, ಗವಿರಾಯಪ್ಪ, ಎಸ್.ಎನ್. ಅಶ್ವತ್ಥನಾರಾಯಣ್, ನರೇಂದ್ರ, ವಕೀಲ ಮಠಮಪ್ಪ, ನರಸಿಂಹರಾಜು ಮತ್ತಿತರರು ಇದ್ದರು.



ಸುದ್ದಿಗೋಷ್ಠಿಯಲ್ಲಿ ವಿ.ಎಸ್. ಉಗ್ರಪ್ಪ ಮಾತನಾಡಿದರು. ಸ್ಥಳೀಯ ಮುಖಂಡರು ಇದ್ದರು.

ಕುಲಶಾಸ್ತ್ರ ಅಧ್ಯಯನ ನಡೆಯಲಿ: ಉಗ್ರಪ್ಪ

ಕುರುಬ, ಗೊಲ್ಲ, ಕೋಳಿ ಸಮುದಾಯ ಸೇರಿ ಅನೇಕ ಸಮುದಾಯಗಳನ್ನು ಎಸ್ಟಿಗೆ ಸೇರಿಸುವ ಕುರಿತು ಸರ್ಕಾರಕ್ಕೆ ಮನವಿ ಮಾಡಿದೆ. ಅರ್ಹತೆಯಿರುವ ಸಮುದಾಯಗಳನ್ನು ಎಸ್ಟಿಗೆ ಸೇರಿಸಲು ನಮ್ಮದು ಯಾವ ಅಭ್ಯಂತರವಿಲ್ಲ, ಆದರೆ, ಆಯಾ ಸಮುದಾಯದ ಕುಲಶಾಸ್ತ್ರ ಅಧ್ಯಯನ ಆಗಬೇಕು.

ನಾವು ಮೊದಲಿ ನಿಂದಲೂ ಬದುಕಿನಲ್ಲಿ ಸಂಘರ್ಷ ಮಾಡಿಕೊಂಡೇ ಬಂದವರು. ನಾಯಕರು ಕೇವಲ ಸುದ್ದಿಗೋಷ್ಠಿ ನಡೆಸಿ ಸುಮ್ಮನಾಗುತ್ತಾರೆ ಎಂದು ಭಾವಿಸಬೇಡಿ. ಕೇಂದ್ರ ಸರ್ಕಾರ ಹೀಗೆ ನಿರ್ಲಕ್ಷ್ಯ ಧೋರಣೆ ತಾಳಿದರೆ ಯಾವುದೇ ರೀತಿಯ ಹೋರಾಟಕ್ಕೂ ಸಿದ್ಧ. ನಮ್ಮ ಸಮುದಾಯದ ಇತರ ನಾಯಕರು ಕೂಡ ಬಿಜೆಪಿ, ಕಾಂಗ್ರೆಸ್, ಜೆಡಿಎಸ್‌ನಲ್ಲಿ ಇದ್ದಾರೆ. ನೀವು ಗೆದ್ದಿರುವುದು ಮೀಸಲಾತಿಯಿಂದ ಅದನ್ನು ನೆನಪಿನಲ್ಲಿ ಇಟ್ಟುಕೊಂಡು ಸಮುದಾಯದ ಹಿತದೃಷ್ಟಿಯಿಂದ ನಿಮ್ಮನ್ನು ಬೆಳೆಸಿದ ಸಮುದಾಯದ ಪರ ಧ್ವನಿ ಎತ್ತಿ ಎಂದು ಉಗ್ರಪ್ಪ ಆಗ್ರಹಿಸಿದರು.

ಮಾವಿನ ಮರಕ್ಕೆ ಸಾವಯವ ಗೊಬ್ಬರ ಬಳಸಲು ಸಲಹೆ

ಕಾಗತಿ ಗ್ರಾಮದಲ್ಲಿ ರೈತರ ತರಬೇತಿ ಕಾರ್ಯಾಗಾರದಲ್ಲಿ ಐಐಎಚ್‌ಆರ್‌ನ ಡಾ. ಚೇತನ್

ಚಿಂತಾಮಣಿ: ಮಾವಿನ ಮರಗಳಿಗೆ ಸಾವಯವ ಗೊಬ್ಬರವನ್ನು ಪೂರಕವಾಗಿ ಬಳಸಬೇಕು, ಮರಗಳ ಬುಡಕ್ಕೆ ಆಗಾಗ್ಗೆ ಗೋವಿನ ಗಂಜಲ, ಸಗಣಿ ಗೊಬ್ಬರ ಮತ್ತು ಬೇವಿನ ಹಿಂಡಿಯನ್ನು ಬೆರೆಸಿ ಹಾಕುವುದರ ಜೊತೆಗೆ, ಗಿಡಗಳಿಗೆ ತೇವಾಂಶ ಕಾಪಾಡಲು ವಿಶೇಷ ಕಾಳಜಿ ವಹಿಸಿಬೇಕು. ಇದರಿಂದ ಮಾವಿನ ಮರಗಳಿಂದ ಹೆಚ್ಚಿನಇಳುವರಿಪಡೆಯಬಹುದೆಂದುತೋಟಗಾರಿಕೆಯ ಅಧಿಕಾರಿ ಬಾಲಕೃಷ್ಣ ನುಡಿದರು.

ತಾಲೂಕಿನ ಕಾಗತಿ ಗ್ರಾಮದ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ತೋಟಗಾರಿಕೆ ಇಲಾಖೆ ಮತ್ತು ಎನ್‌ಆರ್‌ಡಿಎಸ್ ಸಂಸ್ಥೆ ಅಡಿಯಲ್ಲಿ ರೈತರಿಗೆ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿ ಮಾವಿಗೆ ಹಲವು ಸಮಸ್ಯೆಗಳು ಉದ್ಭವಿಸುತ್ತವೆ. ಅವುಗಳನ್ನು ನಿವಾರಣೆ ಮಾಡಬೇಕಾದರೆ ರೈತರು ನಿಪುಣರಿಂದ ಮಾಹಿತಿ ಪಡೆದು ಮಾವಿನ ಮರಗಳ ಪೋಷಣೆಗೆ ಮುಂದಾದಾಗ ಇಳುವರಿ ಹೆಚ್ಚಾಗುತ್ತದೆ ಎಂದರು.

ಐಐಹೆಚ್‌ಆರ್‌ನ ಡಾ. ಚೇತನ್ ಮಾತನಾಡಿ ಮಣ್ಣು ಪರೀಕ್ಷೆ ಮತ್ತು ಸಾವಯವ ಉತ್ಪನ್ನಗಳ ಬಳಕೆಯ ಬಗ್ಗೆ ರೈತರಿಗೆ ಮಾಹಿತಿ ನೀಡಿ ಮಣ್ಣು ಜೀವ ವೈವಿಧ್ಯದಲ್ಲಿ ವಹಿಸಿದ ಮಹತ್ತರ ಪಾತ್ರವನ್ನು ಗಮನಿಸಿ, ನಾವೆಲ್ಲರೂ ಮಣ್ಣಿನ ಸಂರಕ್ಷಣೆ ಮಾಡಲು ಮುಂದಾಗಬೇಕಾಗಿದೆ ಎಂದರು.

ಮಣ್ಣಿನ ಪರೀಕ್ಷೆ ಮಾಡಿಸದೆ, ರಾಸಾಯನಿಕ ಗೊಬ್ಬರ ಹಾಕುವುದರಿಂದ ಅವಶ್ಯಕತೆಗಿಂತ ಹೆಚ್ಚಿಗೆ ಖರ್ಚು ಮಾಡುವುದರೊಂದಿಗೆ ಭೂಮಿಯ ಗುಣಮಟ್ಟವು ಹಾಳಾಗುತ್ತದೆ. ಇತ್ತೀಚಿನ ದಿನಗಳಲ್ಲಿ ರಾಸಾಯನಿಕ ಗೊಬ್ಬರದ ಬೆಲೆ ಅಧಿಕವಾಗಿರುವ ಮಣ್ಣಿನ ಪರೀಕ್ಷೆಯ ಆಧಾರದ ಮೇಲೆ ಅವಶ್ಯವಿದ್ದಷ್ಟು ಗೊಬ್ಬರ ಕೊಡುವುದು ಅನಿವಾರ್ಯವಾಗಿದೆ ಎದರು.

ಎನ್‌ಆರ್‌ಡಿಎಸ್ ಸಂಸ್ಥೆಯ ಕಿರಣ್ ಮಾತನಾಡಿ ರೈತರು ತೋಟಗಾರಿಕೆ ಇಲಾಖೆ ಮತ್ತು ಕೃಷಿ ಇಲಾಖೆ ಹಾಗೂ ವಿಜ್ಞಾನಿಗಳಿಂದ ಬರುವ ಮಾಹಿತಿಗಳನ್ನು ತಿಳಿದುಕೊಂಡು ಬೆಳೆಗಳಿಗೆ ನೀಡಬೇಕಾಗಿರುವ ಪೋಷಕಾಂಶಗಳನ್ನು ನೀಡುವುದರ ಮೂಲಕ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ ಎಂದರು.

ಭಾಗವಹಿಸಿದ್ದ ಎಲ್ಲಾ ರೈತರಿಗೆ ಹೊಂಗೆ ಹಿಂಡಿ, ಬೇವಿನ ಹಿಂಡಿ, ಮ್ಯಾಂಗೋ ಸ್ಪೇಷಲ್ ಕಿಟ್ ವಿತರಣೆ ಮಾಡಲಾಯಿತು

ಈ ಸಂದರ್ಭದಲ್ಲಿ ಆರ್‌ಸಿ ಸಂಸ್ಥೆಯ ಅಜೀಷಾ, ಎನ್‌ಆರ್‌ಡಿಎಸ್‌ನ ಕೆ.ಕೆ. ರಾಜಣ್ಣ ಎಲ್‌ಹೆಚ್‌ಗಳಾದ ಕಸಬಾ ಹೋಬಳಿ ಶ್ರೀನಿವಾಸ್ ಮತ್ತು ಆಶಾ ಮತ್ತು ನಿಮ್ಮಕಾಯಲಹಳ್ಳಿ ರಾಮಚಂದ್ರ ಮತ್ತು ಶಿಲ್ಪ ಜೊತೆಗೆ ನೂರಾರು ರೈತರು ಕಾರ್ಯಾಗಾರ ಉಪಯೋಗ ಪಡೆದುಕೊಂಡರು.



ತಾಲೂಕಿನ ಕಾಗತಿ ಗ್ರಾಮದಲ್ಲಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ತೋಟಗಾರಿಕೆ ಇಲಾಖೆ ಮತ್ತು ಎನ್‌ಆರ್‌ಡಿಎಸ್ ಸಂಸ್ಥೆ ಅಡಿಯಲ್ಲಿ ರೈತರಿಗೆ ಹಮ್ಮಿಕೊಳ್ಳಲಾಗಿದ್ದ ತರಬೇತಿ ಕಾರ್ಯಕ್ರಮದಲ್ಲಿ ಅಧಿಕಾರಿಗಳು ರೈತರಿಗೆ ಹೊಂಗೆ ಹಿಂಡಿ, ಬೇವಿನ ಹಿಂಡಿ, ಮ್ಯಾಂಗೋ ಸ್ಪೆಷಲ್ ಕಿಟ್ ವಿತರಿಸಲಾಯಿತು.

ಗೋಲ್ಡನ್ ಗ್ಲೀಮ್ಸ್ ಕಾಲೇಜಿನಲ್ಲಿ ಬಿ.ಕಾಂ. ವಿದ್ಯಾರ್ಥಿಗಳ ಸಾಧನೆ



• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ:

ನಗರದ ದಿ ಗೋಲ್ಡನ್ ಗ್ಲೀಮ್ಸ್ ಪದವಿ ಕಾಲೇಜು ವಿದ್ಯಾರ್ಥಿಗಳು ಬಿ.ಕಾಂ ಮೂರನೇ ಸೆಮಿಸ್ಟರ್‌ಫಲಿತಾಂಶದಲ್ಲಿ ಗಮನಾರ್ಹ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಬಿ.ಕಾಂ ವಿಭಾಗದ ನಾಲ್ಕು ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ತೋರಿದ್ದು, ಈ ಬಗ್ಗೆ ಕಾಲೇಜಿನ ಪ್ರಾಂಶುಪಾಲ ಸಿ.ಎಂ. ಮುನಿಕೃಷ್ಣ ಹರ್ಷ ವ್ಯಕ್ತಪಡಿಸಿದ್ದಾರೆ.

ಕಾಲೇಜು ಆವರಣದಲ್ಲಿ ಈ ನಾಲ್ವರು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ವೈಯಕ್ತಿಕ ಸಾಧನೆಗಳೂ ಗಮನಸೆಳೆದವು. ದಿವ್ಯಶ್ರೀ 750ರಲ್ಲಿ 704 ಅಂಕ ಗಳಿಸಿದ್ದು, ಅಕ್ಷಯಾ 686 ಅಂಕ, ನಿತ್ಯ ಶ್ರೀ 661 ಅಂಕ ಹಾಗೂ ನಿಶ್ಚಿತ 655 ಅಂಕ ಪಡೆದು ವಿಶೇಷ ಸಾಧನೆ ಮೆರೆದಿದ್ದಾರೆ. ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

ಸಿಕೆಬಿ-4 ನಗರದ ದಿ ಗೋಲ್ಡನ್ ಗ್ಲೀಮ್ಸ್ ಪದವಿ ಕಾಲೇಜಿನ ಬಿ.ಕಾಂ ಮೂರನೇ ಸೆಮಿಸ್ಟರ್‌ನಲ್ಲಿ ಗಮನಾರ್ಹ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದ ನಾಲ್ಕು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು

16 ಎಕ್ರೆ ಸರ್ಕಾರಿ ಕೆರೆ ಜಮೀನು ರಕ್ಷಿಸಿ ಪಹಣಿ ರದ್ದತಿಗೆ ಎಸಿ ಸೂಚನೆ

ಬಂಗಾರಪೇಟೆ: ನಕಲಿ ದಾಖಲೆ ಸೃಷ್ಟಿಸಿ ಸರ್ಕಾರಿ ಕೆರೆ ಜಾಗವನ್ನು ತಮ್ಮ ಹೆಸರಿಗೆ ಮಾಡಿಕೊಂಡಿದ್ದ ಖಾಸಗಿ ವ್ಯಕ್ತಿಗಳ ಪಹಣಿ ರದ್ದುಗೊಳಿಸಿ, ಜಮೀನನ್ನು ಸರ್ಕಾರಿ ಕೆರೆ ಎಂದು ಉಪವಿಭಾಗಾಧಿಕಾರಿ ಜಂಬಗಿ ರೇಣುಕಾ ಪ್ರಸಾದ್ ದೀಲಿಪ್ ದಾಖಲಿಸಲು ಸೂಚಿಸಿದ್ದಾರೆ.



ನಳಿನಗೌಡ

ತಾಲೂಕಿನಕಾಮಸಮುದ್ರ ಹೋಬಳಿಯ ಯಳಚಮಂದೆ ಗ್ರಾಮದಲ್ಲಿ ಕೆಲ ವ್ಯಕ್ತಿಗಳು ನಕಲಿ ದಾಖಲೆ ಸೃಷ್ಟಿಸಿ 16 ಎಕರೆ 16 ಗುಂಟೆ ವಿಸ್ತೀರ್ಣದ ಸರ್ಕಾರಿ ಕೆರೆ ಜಮೀನನ್ನು ತಮ್ಮ ಹೆಸರಿಗೆ ಮಾಡಿ ಕೊಂಡಿದ್ದರು. ಇದರ ವಿರುದ್ಧ ರೈತ ಸಂಘದ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ನಳಿನಿಗೌಡ ಅವರು ಲೋಕಾಯುಕ್ತ ನ್ಯಾಯಾಲಯದಲ್ಲಿ ಸುದೀರ್ಘ ಹೋರಾಟ ನಡೆಸಿದ್ದರು. ಕೆರೆ ಉಳಿ ಸುವಂತೆ ಅವರು ಸಲ್ಲಿಸಿದ್ದ ದೂರಿನ ಅನ್ವಯ ತನಿಖೆ ಚುರುಕುಗೊಂಡಿತ್ತು. ಪ್ರಕರಣದ ವಿಚಾರಣೆ ನಡೆಸಿದ ತಹಸೀಲ್ದಾರರು, 16 ಎಕರೆ 16 ಗುಂಟೆ ಜಮೀನು ಮೂಲತಃ ಸರ್ಕಾರಿ ಕೆರೆ ಎಂಬುದನ್ನು ದೃಢಪಡಿಸಿದ್ದರು.

ತಹಸೀಲ್ದಾರರು ನೀಡಿದ ವರದಿ ಮೇಲೆ ಕೆರೆ ಜಮೀನಿನ ಅಕ್ರಮ ಪಹಣಿ ರದ್ದುಗೊಳಿಸಲು ಎಸಿ ಕೋರ್ಟ್ ನಿರ್ಧರಿಸಿತ್ತು. ಭೂ ಕಂದಾಯ ಕಾಯ್ದೆ ನಿಯಮಗಳ ಪ್ರಕಾರ ಕೆರೆ ಅಥವಾ ಸಾರ್ವಜನಿಕ ಜಲಮೂಲಗಳನ್ನು ಯಾವುದೇ ಖಾಸಗಿ ವ್ಯಕ್ತಿಗಳಿಗೆ ಹಂಚಿಕೆ ಮಾಡಲು ಅಥವಾ ಮಂಜೂರು ಮಾಡಲು ಅವಕಾಶವಿಲ್ಲ. ಏಪ್ರಿಲ್ 29 ರಂದು ಹೊರಡಿಸಿದ ಆದೇಶದಲ್ಲಿ, ಅಕ್ರಮ ಪಹಣಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ, ಕಂದಾಯ ದಾಖಲೆಗಳಲ್ಲಿ ಪುನಃ ಸರ್ಕಾರಿ ಕೆರೆ ಎಂದು ನಮೂದಿಸಲಾಗಿದೆ.

ಬಂಗಾರಪೇಟೆ ರಾಜೀವ್ ಗಾಂಧಿ ಸಮುದಾಯ ಭವನ ಕಾಪಾಡಿ

ದಲಿತ ರೈತಸೇನೆ ಅಧ್ಯಕ್ಷ ಹುಣಸನಹಳ್ಳಿ ವೆಂಕಟೇಶ್ ಆಗ್ರಹ



ಪೌರಾಯುಕ್ತ ಸತ್ಯನಾರಾಯಣರಿಗೆ ದಲಿತ ರೈತ ಸೇನೆ ಅಧ್ಯಕ್ಷ ಹುಣಸನಹಳ್ಳಿ ವೆಂಕಟೇಶ್ ಮನವಿ ಸಲ್ಲಿಸಿದರು.

ಬಂಗಾರಪೇಟೆ: ರಾಜೀವ್ ಗಾಂಧಿ ಸಮುದಾಯ ಭವನವು ಸಾರ್ವಜನಿಕರ ಉಪಯೋಗಕ್ಕಾಗಿ ನಿರ್ಮಿಸಲಾಗಿದ್ದರೂ, ಪ್ರಸ್ತುತ ಅದು ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದ್ದು ನಗರಸಭೆ ಕೂಡಲೇ ಭವನವನ್ನು ದುರಸ್ತಿಗೊಳಿಸಿ ಸಾರ್ವಜನಿಕರ ಬಳಕೆಗೆ ಅನುವು ಮಾಡಿಕೊಡಬೇಕೆಂದು ದಲಿತ ರೈತಸೇನೆ ಅಧ್ಯಕ್ಷ ಹುಣಸನಹಳ್ಳಿ ಎನ್. ವೆಂಕಟೇಶ್ ಒತ್ತಾಯಿಸಿದರು.

ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಈ ಸಮುದಾಯ ಭವನವನ್ನು 2014ರಲ್ಲಿ ಐ.ಡಿ.ಎಸ್.ಎಂ.ಟಿ ಯೋಜನೆಯಡಿ ಸಾರ್ವಜನಿಕರ ಸೌಕರ್ಯಕ್ಕಾಗಿ ನಿರ್ಮಿಸಲಾಗಿತ್ತು. ಆದರೆ ಕಳೆದ ಕೆಲವು ವರ್ಷಗಳಿಂದ ಭವನ ನಿರ್ವಹಣೆ ಕೊರತೆಯಿಂದ ನಿರ್ಲಕ್ಷ್ಯಕ್ಕೊಳಗಾಗಿ, ಸಮಾಜದ ಹಿತಾಸಕ್ತಿಗೆ ವಿರುದ್ಧವಾಗಿ ಬಳಸಲಾಗುತ್ತಿದೆಎಂಬಆರೋಪಗಳುಕೇಳಿಬರುತ್ತಿವೆ.ಸಾರ್ವಜನಿಕಕಾರ್ಯಕ್ರಮಗಳು, ಸಭೆಗಳು, ಸಾಮಾಜಿಕ ಚಟುವಟಿಕೆಗಳಿಗೆ ಬಳಸಬೇಕಾದ ಈ ಸ್ಥಳವು ಈಗ ಅಸಭ್ಯ ಹಾಗೂ ಅನೈತಿಕ ಚಟುವಟಿಕೆಗಳಿಗೆ ವೇದಿಕೆಯಾಗಿರುವುದು ದುರಂತವೇ ಸರಿ ಎಂದರು.

ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸದಿದ್ದರೆ, ಮುಂದಿನ ದಿನಗಳಲ್ಲಿ ಸಂಘಟನೆಗಳ ವತಿಯಿಂದ ತೀವ್ರ ಹೋರಾಟ ಹಮ್ಮಿಕೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಸರ್ಕಾರದ ಅನೇಕ ಅಭಿವೃದ್ಧಿ ಯೋಜನೆಗಳ ಅಡಿಯಲ್ಲಿ ನಿರ್ಮಿಸಲಾದ ಸಾರ್ವಜನಿಕ ಆಸ್ತಿಗಳು ಸರಿಯಾದ ನಿರ್ವಹಣೆ ಇಲ್ಲದೆ ಹಾಳಾಗುತ್ತಿರುವುದು ಚಿಂತಾಜನಕವಾಗಿದೆಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ವೇಳೆ ಸಂಘದ ಜಿಲ್ಲಾಧ್ಯಕ್ಷ ರಾಜುಕೋಟೆ, ಹುಣಸನಹಳ್ಳಿ ಸತೀಶ್, ಕೊಂಡನಹಳ್ಳಿ ರವಿ, ಕಾರಮಾನಹಳ್ಳಿ ಅಶೋಕ್ ಇದ್ದರು.

ಬಡವರಿಗೆ ಸೂರು ಭಾಗ್ಯ | ಅರ್ಹ ಫಲಾನುಭವಿಗಳಿಗೆ 4,046 ನಿವೇಶನ ವಿತರಿಸಲು ನಿರ್ಧಾರ: ಪುಟ್ಟಸ್ವಾಮಿಗೌಡ

ಗೌರಿಬಿದನೂರು ತಾ. ನಿರ್ಗತಿಕರಿಗೆ ಶೀಘ್ರ ನಿವೇಶನ: ಶಾಸಕ

• **ಕನ್ನಡಪ್ರಭ ವಾರ್ತೆ,** ಗೌರಿಬಿದನೂರು

ತಾಲೂಕಿನಲ್ಲಿ ನಿವೇಶನ ರಹಿತ ಬಡವರಿಗೆ ಸೂರು ಕಲ್ಪಿಸುವ ನಿಟ್ಟಿನಲ್ಲಿ ಆದಷ್ಟು ಶೀಘ್ರವಾಗಿ ನಿವೇಶನಗಳನ್ನು ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಪುಟ್ಟಸ್ವಾಮಿಗೌಡ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲೂಕಿನ ಕಡುಬಡವರ ಮತ್ತು ನಿವೇಶನ ರಹಿತರ ಕನಸನ್ನು ನನಸಾಗಿಸುವ ನಿಟ್ಟಿನಲ್ಲಿ ಮಹತ್ವದ ಕ್ರಮ ಕೈಗೊಳ್ಳಲಾಗಿದ್ದು, ಒಟ್ಟು 4,046 ನಿವೇಶನಗಳನ್ನು ವಿತರಿಸಲು ತೀರ್ಮಾನಿಸಲಾಗಿದೆ ಎಂದರು.

ತಾಲೂಕಿನಾದ್ಯಂತ ಗ್ರಾಮೀಣ ಮಟ್ಟದಲ್ಲಿ ಒಟ್ಟು 176 ಎಕರೆ ಜಮೀನನ್ನು ನಿವೇಶನ ಹಂಚಿಕೆಗಾಗಿ ಈಗಾಗಲೇ ಗುರುತಿಸಲಾಗಿದೆ. ಅರ್ಹ ಫಲಾನುಭವಿಗಳನ್ನು ಪಾರದರ್ಶಕವಾಗಿ ಆಯ್ಕೆ ಮಾಡಲು ಮೇ 11ರಿಂದ ಮೇ 20ರವರೆಗೆ ಪ್ರತಿ ಪಂಚಾಯತ್ ವ್ಯಾಪ್ತಿಯಲ್ಲಿ ವಿಶೇಷ ಗ್ರಾಮ ಸಭೆಗಳನ್ನು ನಡೆಸಲಾಗುವುದು. ಈ ಗ್ರಾಮ ಸಭೆಗಳಲ್ಲಿ ತಾಲೂಕು ಆಡಳಿತಾಧಿಕಾರಿಗಳು, ಪಿ.ಡಿ.ಒಗಳು, ಇ.ಒ ಹಾಗೂ ನಾನು ಕೂಡ ಭಾಗವಹಿಸಿ ಯಾವುದೇ ತಾರತಮ್ಯವಿಲ್ಲದೆ, ಅತ್ಯಂತ ಪ್ರಾಮಾಣಿಕವಾಗಿ ನಿಜವಾದ ನಿವೇಶನ ರಹಿತರನ್ನು ಗುರುತಿಸಿ ನಿವೇಶನ ನೀಡುವ ವ್ಯವಸ್ಥೆ ಮಾಡಲಾಗುವುದು ಎಂದು ಶಾಸಕರು ಭರವಸೆ ನೀಡಿದರು.

ಲೇಔಟ್ ನಿರ್ಮಾಣಕ್ಕೆ ಕ್ರಮ: ನಗರದ ಬರ್ಜಾನುಕುಂಟೆಯಲ್ಲಿ 21 ಎಕರೆ 32 ಗುಂಟೆ ಜಮೀನಿನಲ್ಲಿ ಒಟ್ಟು 687 ನಿವೇಶನಗಳನ್ನು ಅಭಿವೃದ್ಧಿಪಡಿಸಲಾಗಿದೆ. ಈ ಪೈಕಿ 212 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಉಳಿದ 261 ಅರ್ಹ ಫಲಾನುಭವಿಗಳನ್ನು ಗುರುತಿಸಿ ಶೀಘ್ರದಲ್ಲೇ ನಿವೇಶನ ನೀಡಲಾಗುವುದು. ಸಾಗನಹಳ್ಳಿಯಲ್ಲಿ ಸುಮಾರು 20 ಎಕರೆ (19 ಎಕರೆ 33 ಗುಂಟೆ) ಜಾಗ ಗುರುತಿಸಲಾಗಿದ್ದು, ಲೇಔಟ್ ನಿರ್ಮಾಣಕ್ಕೆ ಅಗತ್ಯವಾದ ಹಣವನ್ನು ಕಾಯ್ದಿರಿಸಲಾಗಿದೆ. ನಗರದ ಬೆಳವಣಿಗೆಯ ದೃಷ್ಟಿಯಿಂದ ಇಲ್ಲಿ ಅತ್ಯಾಧುನಿಕ ಹಾಗೂ ಗುಣಮಟ್ಟದ ಲೇಔಟ್ ನಿರ್ಮಿಸಿ, ನಿವೇಶನ ರಹಿತರಿಗೆ ಹಂಚಲಾಗುವುದು ಎಂದು ಶಾಸಕರು ತಿಳಿಸಿದರು.

ಸಭೆಯಲ್ಲಿ ತಹಶೀಲ್ದಾರ್ ಅರವಿಂದ್. ಕೆ.ಎಂ, ತಾ.ಪಂ ಇಒ ಜಿ.ಕೆ. ಹೊನ್ನಯ್ಯ, ಪೌರಾಯುಕ್ತ ರಮೇಶ್ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖಾ ಅಧಿಕಾರಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



ಸುದ್ದಿಗೋಷ್ಠಿಯಲ್ಲಿ ಶಾಸಕ ಪುಟ್ಟಸ್ವಾಮಿಗೌಡ ಅವರು ಮಾತನಾಡಿದರು.

- ತಾಲೂಕಲ್ಲಿ ನಿವೇಶನ ಹಂಚಿಕೆಗಾಗಿ ಗ್ರಾಮೀಣ ಮಟ್ಟದಲ್ಲಿ 176 ಎಕರೆ ಜಾಗವನ್ನು ಗುರುತಿಸಲಾಗಿದೆ
- ಫಲಾನುಭವಿಗಳ ಆಯ್ಕೆಗೆ ಮೇ 11ರಿಂದ 20ರವರೆಗೆ ಪ್ರತಿ ಪಂಚಾಯತ್ ವ್ಯಾಪ್ತಿ ವಿಶೇಷ ಗ್ರಾಮ ಸಭೆ
- ಯಾವುದೇ ತಾರತಮ್ಯವಿಲ್ಲದೆ, ಪ್ರಾಮಾಣಿಕವಾಗಿ ನೈಜ ನಿವೇಶನ ರಹಿತರಿಗೆ ನಿವೇಶನ ನೀಡುವ ಉದ್ದೇಶ

ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಗಾರಿಕೆಗಳ ಸಹಭಾಗಿತ್ವ ಅಗತ್ಯ: ಡಿಸಿ

ವಿವಿಧ ಸಂಘ ಸಂಸ್ಥೆಗಳು, ಪ್ರಮುಖ ಉದ್ದಿಮೆದಾರರ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ರವಿ ಅಭಿಪ್ರಾಯ

• **ಕನ್ನಡಪ್ರಭ ವಾರ್ತೆ** ಕೋಲಾರ

ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಮಾರಾಟ ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ವಿವಿಧ ಸಂಘ ಸಂಸ್ಥೆಗಳು ಸರ್ಕಾರದೊಂದಿಗೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ತಿಳಿಸಿದರು

ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿಯ ಕೇಸ್ವಾನ್ ಸಭಾಂಗಣದಲ್ಲಿ ವಿವಿಧ ಸಂಘ ಸಂಸ್ಥೆಗಳು ಹಾಗೂ ಪ್ರಮುಖ ಉದ್ದಿಮೆದಾರರ ವಿಶೇಷ ಸಭೆಯಲ್ಲಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ಕೈಗಾರಿಕೆಗಳು ಮತ್ತು ಸಂಸ್ಥೆಗಳು ಕಡ್ಡಾಯವಾಗಿ ಮಾದಕವಸ್ತು ನಿಯಂತ್ರಣ ಆಂತರಿಕ ಸಮಿತಿಗಳನ್ನು ರಚಿಸಬೇಕು ಮತ್ತು ಈ ಸಮಿತಿಗಳು ನಿಯಮಿತವಾಗಿ ಸಭೆ ನಡೆಸಿ ಚರ್ಚಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.


ಡಾ.ಎಂ.ಆರ್.ರವಿ.

ಸಂಸ್ಥೆಗಳು ತಮ್ಮ ಸ್ವಂತ ನಿಧಿಯಲ್ಲಿ ಸಾರ್ವಜನಿಕ ಜಾಗೃತಿ ಮೂಡಿಸುವ ಕರಪತ್ರಗಳು ಮತ್ತು ಮಾಹಿತಿ ಸಾಮಗ್ರಿಗಳನ್ನು ಸಿದ್ದಪಡಿಸಿ, ಕಾರ್ಮಿಕರಲ್ಲಿ ನಿರಂತರ ಜಾಗೃತಿ ಮೂಡಿಸಬೇಕು. ಮಾದಕವಸ್ತು ಮುಕ್ತ ಕರ್ನಾಟಕ ನಿರ್ಮಾಣದ ನಿಟ್ಟಿನಲ್ಲಿ ರೂಪಿಸಲಾಗಿರುವ ವಿಶೇಷ ಮೊಬೈಲ್ ಆಪ್‌ನ್ನು ಎಲ್ಲಾ ಉದ್ಯೋಗಿಗಳು ಡೌನ್ ಲೋಡ್‌ಮಾಡಿಕೊಂಡು ಬಳಸುವಂತೆ ಉತ್ತೇಜಿಸಬೇಕು ಎಂದರು.

ಮಾದಕವಸ್ತು ಮುಕ್ತ ಪರಿಸರ ನಿರ್ಮಾಣಕ್ಕಾಗಿ ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಹಾಗೂ ಕಾರ್ಮಿಕ ಇಲಾಖೆಯೊಂದಿಗೆ ಕೈಗಾರಿಕೆಗಳು ನಿರಂತರ ಸಂಪರ್ಕ ಮತ್ತು ಸಮನ್ವಯ ಸಾಧಿಸಬೇಕು. ಜಿಲ್ಲಾಡಳಿತ ಹಾಗೂ ಪೊಲೀಸ್ ಅಧಿಕಾರಿಗಳು ಕೈಗಾರಿಕಾ ಪ್ರದೇಶಗಳಿಗೆ ಆಕಸ್ಮಿಕ ಭೇಟಿ ನೀಡಲಿದ್ದು, ಉದ್ದಿಮೆದಾರರು ಇದಕ್ಕೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಪಾಲ್ಗೊಂಡಿದ್ದ ಪ್ರಮುಖ ಉದ್ಯೋಗದಾತರು ತಮ್ಮ ಸಂಸ್ಥೆಗಳಲ್ಲಿ ಈಗಾಗಲೇ ಜಾರಿಯಲ್ಲಿರುವ ಭದ್ರತಾ ಕ್ರಮಗಳು, ಆಲ್ಕೋಹಾಲ್ ಪತ್ತೆ ಹಚ್ಚುವ ತಪಾಸಣೆಗಳು ಹಾಗೂ ಆಪ್ತ ಸಮಾಲೋಚನಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ಹಂಚಿಕೊಂಡರು. ಜಿಲ್ಲೆಯನ್ನು ಮಾದಕವಸ್ತು ಮುಕ್ತವಾಗಿಸಲು ಜಿಲ್ಲಾಡಳಿತದೊಂದಿಗೆ ಕೈಜೋಡಿಸುವುದಾಗಿ ಉದ್ಯಮದ ಪ್ರತಿನಿಧಿಗಳು ಭರವಸೆ ನೀಡಿದರು. ಸಭೆಯಲ್ಲಿ ಕೋಲಾರ ಎಸ್‌ಪಿ ಕನ್ನಿಕಾ ಸಿಕ್ರಿವಾಲ್ ಇದ್ದರು.

ಶಾರ್ಟ್ ಸರ್ಕ್ಯೂಟ್‌ನಿಂದ ಮನೆಗೆ ಬೆಂಕಿ: ಲಕ್ಷಾಂತರ ಮೌಲ್ಯದ ವಸ್ತುಗಳು ಕರಕಲು

ಮುದ್ದೇನಹಳ್ಳಿಯಲ್ಲಿ ಘಟನೆ | ಮಕ್ಕಳಿಬ್ಬರು ಪ್ರಾಣಾಪಾಯದಿಂದ ಪಾರು

• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ

ಮನೆಯಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಕಾಣಿಸಿಕೊಂಡ ಬೆಂಕಿಯಿಂದಾಗಿ ಲಕ್ಷಾಂತರ ರು. ಮೌಲ್ಯದ ಚಿನ್ನಾಭರಣ, ನಗದು ಸೇರಿ ವಸ್ತುಗಳು ಸುಟ್ಟು ಕರಕಲಾಗಿರುವ ಘಟನೆ ತಾಲೂಕಿನ ಮುದ್ದೇನಹಳ್ಳಿ ಗ್ರಾಮದಲ್ಲಿ ಬುಧವಾರ ನಡೆದಿದೆ.

ಗ್ರಾಮದ ಶಿಕ್ಷಕ ಮಧುಸೂದನ್ ರೆಡ್ಡಿ ಎಂಬುವರ ಮನೆಯಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಸಂಭವಿಸಿದ್ದು, ಮನೆಯಲ್ಲಿದ್ದ ಇಬ್ಬರು ಮಕ್ಕಳು ಅದೃಷ್ಟವಶಾತ್ ಪ್ರಾಣಾಪಾಯದಿದ ಪಾರಾಗಿದ್ದಾರೆ. ಮಧುಸೂದನ್ ಶಾಲೆಗೆ ಹೋಗಿದ್ದು, ಪತ್ನಿ ಅನಿತಾ ಸತ್ಯಾಸಾಯಿ ಗ್ರಾಮದ ಬಳಿ ನಂದಿನಿ ಬೂತ್ ಇಟ್ಟುಕೊಂಡಿದ್ದ ಹಾಲಿನ ಕೇಂದ್ರಕ್ಕೆ ತೆರಳಿದ್ದರು. ಶಾಲೆಗೆ ರಜೆ ಇದ್ದ ಹಿನ್ನೆಲೆ ಮಕ್ಕಳು ಮಾತ್ರ ಮನೆಯಲ್ಲಿದ್ದರು. ಈ ವೇಳೆ ಇದ್ದಕ್ಕಿದ್ದಂತೆ ಬೆಂಕಿ ಹೊತ್ತಿಕೊಂಡು ಮನೆ ಹೊತ್ತಿ ಉರಿದಿದೆ. ಇದರಿಂದ ಮನೆಯಲ್ಲಿದ್ದ


ಶಾರ್ಟ್ ಸರ್ಕ್ಯೂಟ್ ಗೆ ಸಂಪೂರ್ಣ ಸುಟ್ಟಿರುವ ಮನೆ.

ಬೆಲೆಬಾಳುವ ವಸ್ತುಗಳು ಬೆಂಕಿಗೆ ಆಹುತಿಯಾಗಿ ಮನೆಯ ಬೀರುವಿನಲ್ಲಿದ್ದ 1 ಲಕ್ಷ ನಗದು ಹಾಗೂ ಸುಮಾರು ಅರ್ಧ ಕೆಜಿ ಚಿನ್ನಾಭರಣ ಬೆಂಕಿಗೆ ಆಹುತಿಯಾಗಿವೆ.

ಕೈವಾರ ತಾತಯ್ಯನಿಗೆ ಸಚಿವ ಮುನಿಯಪ್ಪ ವಿಶೇಷ ಪೂಜೆ


ಚಿಂತಾಮಣಿ ತಾಲೂಕಿನ ಕೈವಾರ ಶ್ರೀ ಕ್ಷೇತ್ರಕ್ಕೆ ಗುರುವಾರ ಭೇಟಿ ನೀಡಿದ್ದ ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ. ಎಚ್. ಮುನಿಯಪ್ಪ ಅವರು ತಾತಯ್ಯನವರಿಗೆ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮುಖಂಡ ಗ್ಯಾಸ್ ಶ್ರೀನಿವಾಸ್, ಸಂತೇಕಲ್ಲಹಳ್ಳಿ ಅತಾವುಲ್ಲಾ, ಶ್ಯಾಮರಾಜ್ ಇದ್ದರು.

ಸೋದರ ಸಂಬಂಧಿಯ ಪ್ರೀತಿಸಿ ಮದುವೆಯಾದ ಯುವತಿ!

ವರಸೆಯಲ್ಲಿ ಅಕ್ಕ-ತಮ್ಮ ಮದುವೆ | ರಕ್ಷಣೆ ಕೋರಿ ಪೊಲೀಸರಿಗೆ ಮನವಿ

• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ

ಪ್ರೀತಿಗೆ ಕಣ್ಣಿಲ್ಲ ಅದು ಕುರುಡು ಎಂಬ ಮಾತಿಗೆ ಸಾಕ್ಷಿಯೆಂಬಂತೆ ವರಸೆಯಲ್ಲಿ ಅಕ್ಕ-ತಮ್ಮನಾಗಬೇಕಾದವರೇ ಪ್ರೀತಿಸಿ ಮದುವೆಯಾಗಿ ಪೋಷಕರಿಗೆ ಶಾಕ್ ನೀಡಿರುವ ಘಟನೆ ನಗರದಲ್ಲಿ ನಡೆದಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಸಾವಕನಹಳ್ಳಿಯ ಶಶಿಕಲಾ (29) ಮತ್ತು ಹೊಸಕೋಟೆ ತಾಲೂಕಿನ ಹಳೆಊರಿನ ಪ್ರವೀಣ್ (24) ಎಂಬಾತನನ್ನು ಮದುವೆಯಾಗಿದ್ದಾರೆ. ಅಷ್ಟೇ ಅಲ್ಲದೆ ತಮಗೆ ರಕ್ಷಣೆ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಮತ್ತು ಮಹಿಳಾ ಪೊಲೀಸ್ ಠಾಣೆಗೆ ಮನವಿ ಸಲ್ಲಿಸಿದ್ದಾರೆ.

ಏನಿದು ಘಟನೆ: ಶಶಿಕಲಾ ಮತ್ತು ಪ್ರವೀಣ್ ಸಂಬಂಧಿಕರಾಗಿದ್ದು, ಶಶಿಕಲಾಳ ತಾಯಿಯ ತಂಗಿಯ ಮಗನೇ ಪ್ರವೀಣ್. ಅಂದರೆ ವರಸೆಯಲ್ಲಿ ಇವರಿಬ್ಬರು ಅಕ್ಕ-ತಮ್ಮ. ಇವರ ಪ್ರೀತಿಯ ವಿಷಯ ತಿಳಿದ ಪೋಷಕರು, ಈ ಸಂಬಂಧ ಸಮಾಜದಲ್ಲಿ ಒಪ್ಪಿತವಲ್ಲ ಎಂದು ವಿರೋಧಿಸಿದ್ದರು.

ಅಲ್ಲದೆ, ಶಶಿಕಲಾಗೆ ಬೇರೊಬ್ಬ ಹುಡುಗನೊಂದಿಗೆ ನಿಶ್ಚಿತಾರ್ಥ ನಡೆಸಿ ಇದೇ ಮೇ 29ಕ್ಕೆ ಮದುವೆ ದಿನವನ್ನೂ ನಿಗದಿಪಡಿಸಿದ್ದರು. ಆದರೆ ಮದುವೆಗೆ ಕೆಲವೇ ದಿನ ಇರುವಾಗ ಶಶಿಕಲಾ ಮನೆಯಿಂದ ಹೊರಬಂದು ಪ್ರವೀಣ್‌ನೊಂದಿಗೆ ಚಿಕ್ಕಬಳ್ಳಾಪುರ ತಾಲೂಕಿನ ಅಂಗಟ್ಟ ಗ್ರಾಮದ ದೇವಾಲಯದಲ್ಲಿ ಮದುವೆಯಾಗಿದ್ದಾಳೆ.

ವಿಷಯ ತಿಳಿದ ಶಶಿಕಲಾ ಪೋಷಕರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲೂಕಿನ ಚಪ್ಪರದಕಲ್ಲು ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ನೀಡಿದ್ದಾರೆ.

ಮದುವೆಯಾದ ಬಳಿಕ ಈ ಜೋಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಮತ್ತು ಮಹಿಳಾ ಪೊಲೀಸ್ ಠಾಣೆಗೆ ಧಾವಿಸಿ ರಕ್ಷಣೆ ನೀಡುವಂತೆ ಮನವಿ ಮಾಡಿದೆ.


ಶಶಿಕಲಾ, ಪ್ರವೀಣ್

ನಮ್ಮ ಪಾಡಿಗೆ ನಮ್ಮನ್ನು ಬಿಡಿ

‘ನಾವು ಪರಸ್ಪರ ಇಷ್ಟಪಟ್ಟು ಮದುವೆಯಾಗಿದ್ದೇವೆ, ನಮ್ಮನ್ನು ನಮ್ಮ ಪಾಡಿಗೆ ಬದುಕಲು ಬಿಡಿ’ ಎಂದು ಶಶಿಕಲಾ ಪೊಲೀಸರ ಮುಂದೆ ಹೇಳಿಕೆ ನೀಡಿದ್ದಾಳೆ. ಇತ್ತ ಪೋಷಕರು ‘ವರಸೆಯಲ್ಲಿ ತಮ್ಮನಾಗುವವನನ್ನೇ ಮದುವೆಯಾಗಿ ಇಡೀ ಕುಟುಂಬಕ್ಕೆ ಅವಮಾನ ತಂದಿದ್ದೀಯಾ’ ಎಂದು ಹತಾಶೆ ವ್ಯಕ್ತಪಡಿಸಿದ್ದಾರೆ. ಸದ್ಯ ಈ ವಿಚಿತ್ರ ಮದುವೆ ಪ್ರಕರಣ ಸ್ಥಳೀಯವಾಗಿ ಭಾರೀ ಚರ್ಚೆಗೆ ಗ್ರಾಸವಾಗಿದೆ.

ಐಸಂದ್ರ ಮಿಟ್ಟೂರು ಬಡವರಿಗೆ ಉಚಿತ ನಿವೇಶನಕ್ಕೆ ಡಿಸಿಗೆ ಮನವಿ

ಬೇತಮಂಗಲ: ಬೇತಮಂಗಲ ಹೋಬಳಿಯ ಐಸಂದ್ರ ಮಿಟ್ಟೂರು ದಲಿತ ಹಾಗೂ ಎಲ್ಲಾ ಜಾತಿಯ ಬಡವ ನಿವೇಶನ ರಹಿತರಿಗೆ ಭೂಮಿ ಹಾಗೂ ನಿವೇಶನ ಮಂಜೂರು ಮಾಡಬೇಕೆಂದು ಅಂಬೇಡ್ಕರ್ ಯುವ ವೇದಿಕೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಜೈ ಭೀಮ್ ಶ್ರೀನಿವಾಸ್ ಡಿಸಿ ಎಂ. ಆರ್. ರವಿ ಅವರಿಗೆ ಮನವಿ ಸಲ್ಲಿಸಿದರು. ಕೆಜಿಎಫ್ ಕ್ಷೇತ್ರವು ಮೀಸಲು ಕ್ಷೇತ್ರವಾಗಿದ್ದು, ಅತಿ ಹೆಚ್ಚಾಗಿ ಬಡವ, ನಿರ್ಗತಿಗರು ವಾಸಿಸುತ್ತಿದ್ದು, ಸಾವಿರಾರು ಮಂದಿಗೆ ಸೂಕ್ತ ನಿವೇಶನವಿಲ್ಲದೆ ಗುಡಿಸಿಲಿನಲ್ಲಿ ವಾಸವಿದ್ದು, ಈ ಕೂಡಲೇ ಜನತೆಗೆ ಉಚಿತ ವಿತರಣೆಗೆ ಕ್ರಮ ಕೈಗೊಳ್ಳಬೇಕೆಂದು ಒತಾಯಿಸಿದರು. ಐಸಂದ್ರ ಮಿಟ್ಟೂರು ಗ್ರಾಮಸ್ಥರು, ಕಳೆದ ವರ್ಷದಲ್ಲಿ ಸರ್ವೆ ನಂಬರ್147 ರಲ್ಲಿ ಸರ್ವೇ ಮಾಡಿ ನಿವೇಶನ ಒದಗಿಸಬೇಕೆಂದು ಮನವಿ ಮಾಡಲಾಗಿತ್ತು. ಗ್ರಾಪಂ ಪಿಡಿಒ, ತಾಪಂ ಮೂಲಕ ತಹಸೀಲ್ದಾರ್‌ರಿಗೆ ವರದಿಯಂತೆ 66 ಫಲಾನುಭವಿಗಳಿಗೆ ನಿವೇಶನಕ್ಕಾಗಿ 5 ಎಕರೆ ಜಮೀನು ಅವಶ್ಯಕತೆಯಿದೆ ಎಂದು ವರದಿ ನೀಡಲಾಗಿದೆ. ಆದರೆ ಇದುವರೆಗೂ ತಹಸೀಲ್ದಾರ್ ಮಂಜೂರು ಮಾಡಿಲ್ಲ ಎಂದರು. ಈ ವೇಳೆ ಅಂಬೇಡ್ಕರ್ ಯುವ ವೇದಿಕೆ ಸಂಘಟನೆಯ ರಾಜ್ಯಾಧ್ಯಕ್ಷ ಜೈ ಭೀಮ್ ಶ್ರೀನಿವಾಸ್, ಜಿಲ್ಲಾಧ್ಯಕ್ಷ ಗೋವಿಂದಪ್ಪ ಇದ್ದರು.

ಇಂದಿನಿಂದ ಚೌಡೇಶ್ವರಿದೇವಿ ಜಾತ್ರೆ

ಬೇತಮಂಗಲ: ಕಂಗಾಂಡ್ಲಹಳ್ಳಿ ಶ್ರೀ ಚೌಡೇಶ್ವರಿ ದೇವಿಯ ಜಾತ್ರಾ ಮಹೋತ್ಸವ ಮೇ8 ಶುಕ್ರವಾರದಿಂದ ಭಾನುವಾರದವರೆಗೂ ವಿಶೇಷ ಪೂಜೆ, ಪುಷ್ಪ ಪಲ್ಲಕ್ಕಿ, ಮನರಂಜನೆ ಕಾರ್ಯಕ್ರಮ ನಡೆಯಲಿದೆ. ಶುಕ್ರವಾರ ಬೆಳಗ್ಗೆ ಚೌಡೇಶ್ವರಿ ಅಮ್ಮನವರಿಗೆ ಕ್ಷೀರಾಭಿಷೇಕ, ಅನ್ನದಾನ ದೀಪಾ ಆರಾಧನೆ, ಉತ್ಸವಗಳು ನಡೆಯಲಿವೆ. ಶನಿವಾರ ಬೆಳಗ್ಗೆಯಿಂದ ಸ್ವಾಮಿಗೆ ಅಭಿಷೇಕ, ತಂಬಿಟ್ಟು ದೀಪಾರಾಧನೆ ಪುಷ್ಪ ಪಲಕ್ಕಿ ಹಾಗೂ ಸಂಜೆ ಆರ್ಕೆಸ್ಟ್ರಾ, ಕರಗ ಹಾಗೂ ವಿವಿಧ ಪೂಜಾ ಕೈಂಕರ್ಯ ನಡೆಯುವುವು. ಭಾನುವಾರ ಬೆಳಗ್ಗೆ ಮಹಾಮಂಗಳಾರತಿ ಅಗ್ನಿಕುಂಡ, ವಸಂತೋತ್ಸವ ಮಹಾಮಂಗಳಾರತಿ ಪ್ರಸಾದ ವಿನಿಯೋಗ, ಮಧ್ಯಾಹ್ನ ವಿಶೇಷ ಔತಣಕೂಟ ಏರ್ಪಡಿಸಿದೆ.